2014

<u>**ಕರ್ನಾಟಕ ಸರ್ಕಾರದ ನಡವಳಿಗಳು**</u>

ವಿಷಯ: ಮಡಿಕೇರಿ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ-1)-2021 ಅನ್ನು ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ:ನಅಇ/265/ಮೈಅಪ್ರಾ/2011, ದಿ:6-9-2012.
2) ಮಡಿಕೇರಿ ನಗರಾಭಿವೃದ್ಧಿ ಪ್ರಾಧಿಕಾರದ ಪತ್ರ ಸಂಖ್ಯೆ:ಮನಪ್ರಾ/ಮಹಾ.ಯೋ. ಅನು/01/2012-13, ದಿ:11-2-2013.
3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ:ನಗ್ರಾಯೋ/ಉನಿ/ಮ.ಯೋ.ಪ-1/17/ಅಂತಿಮ/12-13ರಲ್ಲಿ ನೀಡಿರುವ ಅಭಿಪ್ರಾಯ ದಿ:7/5/2013.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ 224 26/8/14

<u>**ಪ್ರಸ್ತಾವನೆ:**</u>

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಸರ್ಕಾರದ ಆದೇಶದಲ್ಲಿ ಮಡಿಕೇರಿ ನಗರ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ-1) ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಪತ್ರದಲ್ಲಿ ಮಡಿಕೇರಿ ನಗರಾಭಿವೃದ್ಧಿ ಪ್ರಾಧಿಕಾರವು, ಮಡಿಕೇರಿ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆ(ಪ-1) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾಯೋಜನೆ(ಪ-1)ರ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ, ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಕಡತದಲ್ಲಿ ಮಡಿಕೇರಿ ನಗರದ ಜನಸಂಖ್ಯೆಯು 2021ರಲ್ಲಿ 50,000ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾಯೋಜನೆಯನ್ನು ತಯಾರಿಸಲಾಗಿದೆ. ಮಡಿಕೇರಿ ನಗರದ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 9347.00 ಹೆಕ್ಟೇರ್ ಪ್ರದೇಶವನ್ನು ನಗರದ ಅಭಿವೃದ್ಧಿಗಾಗಿ ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾಯೋಜನೆ(ಪ-1)ನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ (12)ರಲ್ಲಿ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ, ನಗರದ ಮುಂದಿನ ಯೋಜಿತ ಬೆಳವಣಿಗೆಗೆ ಪ್ರಸ್ತಾಪಿಸಿರುವ 1443.11 ಹೆಕ್ಟೇರ್ ಪ್ರದೇಶವನ್ನು ವಸತಿಗಾಗಿ 728.87 ಹೆಕ್ಟೇರ್ (ಶೇ.50.51), ವಾಣಿಜ್ಯಕ್ಕಾಗಿ 163.96 ಹೆಕ್ಟೇರ್ (ಶೇ.11.36), ಕೈಗಾರಿಕೆಗಾಗಿ 1.69 ಹೆಕ್ಟೇರ್ (ಶೇ.0.12), ಸಾರ್ವಜನಿಕ; ಅರೆಸಾರ್ವಜನಿಕ ಉಪಯೋಗಕ್ಕೆ 84.36 ಹೆಕ್ಟೇರ್ (ಶೇ.5.85), ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 167.80 ಹೆಕ್ಟೇರ್ (ಶೇ.11.63) ಹಾಗೂ ಸಾರಿಗೆ / ಸಂಪರ್ಕ ವಲಯಕ್ಕೆ 121.00 ಹೆಕ್ಟೇರ್ (ಶೇ.8.38), ನಾಗರೀಕ ಸೌಲಭ್ಯಕ್ಕಾಗಿ 4.59 ಹೆಕ್ಟೇರ್ (ಶೇ.0.32), ವ್ಯವಸಾಯಕ್ಕಾಗಿ 164.11 ಹೆಕ್ಟೇರ್ (ಶೇ.11.37), ಪ್ರದೇಶವನ್ನು ನಿಗದಿಪಡಿಸಲಾಗಿದ್ದು, ಇದರಲ್ಲಿ ಜಲಾವೃತ ಪ್ರದೇಶ 6.73 ಹೆಕ್ಟೇರ್ (ಶೇ.0.47) ಪ್ರದೇಶ ಸಹ ಒಳಗೊಂಡಿದೆ. ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆ(ಪ-1)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

25/8

.......2

**ಸರ್ಕಾರದ ಆದೇಶ ಸಂಖ್ಯೆ:ನಅಇ 125 ಮೈಅಪ್ರಾ 2013 ಬೆಂಗಳೂರು, ದಿನಾಂಕ: 21-08-2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಡಿಕೇರಿ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ(ಪ-1)ಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆ(ಪ-1)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಷರತ್ತುಗಳು:

1. ಈ ಆದೇಶದ ದಿನಾಂಕದಿಂದ ಎರಡು ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.
2. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯ ಕಲಂ 69(1)ರ ಪ್ರಕಾರ 5 ವರ್ಷಗಳ ಒಳಗೆ ಉದ್ಯಾನವನ, ಬಯಲು ಜಾಗೆ, ಆಟದ ಮೈದಾನ ಮತ್ತು ಸಾರ್ವಜನಿಕ / ಅರೆ ಸಾರ್ವಜನಿಕ ಉಪಯೋಗಕ್ಕೆ ಮೀಸಲಿಟ್ಟ ಜಮೀನುಗಳನ್ನು ನಿಯಮಾನುಸಾರ ಭೂ ಸ್ವಾಧೀನಪಡಿಸಿಕೊಳ್ಳಲು ಕ್ರಮ ಜರುಗಿಸುವುದು.
3. ಮಡಿಕೇರಿ ಹೂಡಿಕೆದಾರರ ಸಮಾವೇಶದಲ್ಲಿ ಒಡಂಬಡಿಕೆಯಾಗಿ ಒಪ್ಪಿರುವ ಪ್ರಕರಣಗಳಲ್ಲಿ ಸಂಬಂಧಪಟ್ಟ ಹೂಡಿಕೆದಾರರೆ ಅಭಿವೃದ್ಧಿಪಡಿಸಿದಲ್ಲಿ ಮಾತ್ರ ಅಂತಹ ಜಮೀನುಗಳ ಭೂ ಉಪಯೋಗವು ಸಿಂಧುವಾಗುತ್ತದೆ. ಇಲ್ಲವಾದಲ್ಲಿ ಅಂತಹ ಭೂ ಉಪಯೋಗ ಪ್ರಸ್ತಾವನೆಯು ತಂತಾನೆ ರದ್ದಾಗುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಾಜೇಂದ್ರ.ವಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಇವರು ಮೇಲ್ಕಂಡ ಅಧಿಸೂಚನೆಯನ್ನು ಕರ್ನಾಟಕ